## ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.

E-mail:Commissioner.pue@gmail.com. * Ph. No.23361857, 23361858* Fax-23361852

ಸಂಖ್ಯೆ:-ಪಪೂಶಿಇ/ಶೈಶಾ/NTSC /2017-2018 ದಿನಾಂಕ:14/08/2017

### ಜ್ಞಾಪನ

ವಿಷಯ:- NSP2.0 ಪೋರ್ಟಲ್ ನಲ್ಲಿ NMMS ವಿದ್ಯಾರ್ಥಿಗಳ ವಿವರಗಳನ್ನು Upload ಮಾಡುವ ಕುರಿತು ದೂರಸಂಪರ್ಕ ಕಾರ್ಯಕ್ರಮ ನಡೆಸುವ ಬಗ್ಗೆ.

ಉಲ್ಲೇಖ:- DSERT/NTSE/DBT/06/2017-18 ದಿನಾಂಕ:- 01.06.2017

---------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2013, 2014, 2015 ಹಾಗೂ 2016 ನೇ ಸಾಲಿನಲ್ಲಿ 8 ನೇ ತರಗತಿ ವಿದ್ಯಾರ್ಥಿಗಳಿಗೆ ನಡೆದ NMMS ಪರೀಕ್ಷೆಯಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳ ವಿವರಗಳನ್ನು MHRD ನವದೆಹಲಿ ರವರು ರೂಪಿಸಿರುವ **National scholarship portal Website** (www.scolarships.gov.in) ನಲ್ಲಿ ವಿದ್ಯಾರ್ಥಿಗಳು ತಮ್ಮ ವಿವರಗಳನ್ನು upload ಮಾಡುವುದು ಕಡ್ಡಾಯವಾಗಿರುತ್ತದೆ. ನಂತರ ಸಂಬಂಧಿಸಿದ ಕಾಲೇಜಿನ ಮುಖ್ಯಸ್ಥರು ಅನುಮೋದನೆ ಮಾಡಿ ಜಿಲ್ಲಾ ಹಂತಕ್ಕೆ ಕಳುಹಿಸಬೇಕಾಗಿರುತ್ತದೆ. 2013 ಹಾಗೂ 2014 ನೇ ಸಾಲಿನಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳು ಪ್ರಸ್ತುತ ಕ್ರಮವಾಗಿ ಪ್ರಥಮ ಹಾಗೂ ದ್ವಿತೀಯ ಪಿ.ಯು.ಸಿ ಯಲ್ಲಿ ವ್ಯಾಸಂಗ ಮಾಡುತ್ತಿದ್ದಾರೆ.

ಈ ವಿಚಾರವಾಗಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರುಗಳಿಗೆ ಮಾಹಿತಿ ಹಾಗೂ ತರಬೇತಿ ನೀಡಲು ಡಿ.ಎಸ್.ಇ.ಆರ್.ಟಿ ವತಿಯಿಂದ ದಿನಾಂಕ 17/8/2017 ರಂದು ಬೆಳಗ್ಗೆ 10.30 ಗಂಟೆಯಿಂದ 01.00 ಗಂಟೆಯವರೆಗೆ ದೂರಸಂಪರ್ಕ ಕಾರ್ಯಕ್ರಮವನ್ನು (Teleconference) ಹಮ್ಮಿಕೊಳ್ಳಲಾಗಿದೆ. ಸದರಿ ದೂರಸಂಪರ್ಕ ಕಾರ್ಯಕ್ರಮವು ರಾಜ್ಯದ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿರುವ ಬಿ.ಆರ್.ಸಿ (BLOCK RESOURCE CENTRE) ಕೇಂದ್ರಗಳಲ್ಲಿ ಪ್ರಸಾರವಾಗುತ್ತದೆ. ಆದ್ದರಿಂದ ರಾಜ್ಯದ ಎಲ್ಲಾ ಜಿಲ್ಲೆಗಳ ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ರವರುಗಳು ತಮ್ಮ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜಿನ ಪ್ರಾಂಶುಪಾಲರುಗಳಿಗೆ ಸಂಬಂಧಿಸಿದ ತಾಲ್ಲೂಕು ಬಿ.ಆರ್.ಸಿ ಕೇಂದ್ರಗಳಲ್ಲಿ ಹಾಜರಿದ್ದು ಮಾಹಿತಿ ಹಾಗೂ ತರಬೇತಿ ಪಡೆಯಲು ಈ ಮೂಲಕ ಸೂಚಿಸಿದೆ.

14/8

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ

ಗೆ,

ರಾಜ್ಯದ ಎಲ್ಲಾ ಉಪ ನಿರ್ದೇಶಕರು, ಪ.ಪೂ.ಶಿ.ಇಲಾಖೆ, ಇವರ ಮುಖಾಂತರ ಕಾಲೇಜಿನ ಪ್ರಾಂಶುಪಾಲರಿಗೆ- ಸೂಕ್ತ ಕ್ರಮಕ್ಕಾಗಿ

ಪ್ರತಿಯನ್ನು

1. ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಬಹುಮಹಡಿ ಕಟ್ಟಡ ಬೆಂಗಳೂರು
2. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ ಬೆಂಗಳೂರು.
3. ಮಾನ್ಯ ನಿರ್ದೇಶಕರು ಡಿ.ಎಸ್.ಇ.ಆರ್.ಟಿ, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ನಿರ್ದೇಶನಾಲಯ ಬೆಂಗಳೂರು
4. ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು, ಎಸ್.ಎಸ್.ಎ ಮತ್ತು ಆರ್.ಎಂ.ಎಸ್.ಎ ನೃಪತುಂಗ ರಸ್ತೆ ಬೆಂಗಳೂರು